ಅ) ಸರ್ಕಾರಿ ಔಷಧಿ ಮಳಿಗೆಯಿಂದ ಸರಬರಾಜು ರೂ. 3,00,000

ಆ) ನೇರ ಖರೀದಿಗಾಗಿ ರೂ. 2,00,000

ಈ) ಬಂದಿದೆ.

ಉ) ಕ್ರಮ ಕೈಗೊಳ್ಳಲಾಗುತ್ತಿದೆ.

ಹುಬ್ಬಳ್ಳಿ ನಗರ ವಿಧಾನಸಭಾ ಕ್ಷೇತ್ರದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಶಾಲಾ ಶಿಕ್ಷಕರ ಹುದ್ದೆಗಳು.

430 - ಶ್ರೀ ಅಶೋಕ ಕಾಟವೆ (ಹುಬ್ಬಳ್ಳಿ ನಗರ) : ಮಾನ್ಯ ಪ್ರಾಥಮಿಕ ಹಾಗು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆಗಳು ಎಷ್ಟು.

ಆ) ಇವುಗಳಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹಾಗೂ ಪ್ರೌಢಶಾಲಾಶಿಕ್ಷಕರ ಸಂಖ್ಯೆಗಳೆಷ್ಟು.

ಇ) ಸದರಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಸರ್ಕಾರಿ ಪ್ರೌಢಶಾಲೆಗಳು 7
ಸರ್ಕಾರಿ ಪ್ರಾಥಮಿಕ ಶಾಲೆಗಳು 73

ಆ) ಪ್ರಾಥಮಿಕ ಶಾಲಾ ಶಿಕ್ಷಕರು 4
ಪ್ರೌಢಶಾಲಾ ಶಿಕ್ಷಕರು 1

ಇ) ಎರಡೂ ಹಂತದಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಹುಬ್ಬಳ್ಳಿಯಲ್ಲಿ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ.

431 - ಶ್ರೀ ಅಶೋಕ ಕಾಟವೆ (ಹುಬ್ಬಳ್ಳಿ ನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರ ಮತ ಕ್ಷೇತ್ರದಲ್ಲಿ ಕಳೆದ 5 ವರ್ಷದ ಅವಧಿಯಲ್ಲಿ ಎಷ್ಟು ಖಾಸಗಿ ಕಾಲೇಜುಗಳನ್ನು ತೆರೆಯಲು ಅನುಮತಿ ನೀಡಲಾಗಿದೆ?

ಆ) ಅವುಗಳಲ್ಲಿ ಅನುದಾನ ಪಡೆಯುತ್ತಿರುವ ಕಾಲೇಜುಗಳು ಯಾವುವು?

ಇ) ನಗರದಲ್ಲಿರುವ ಒಟ್ಟು ಸರ್ಕಾರಿ ಕಾಲೇಜುಗಳು ಎಷ್ಟು, ಹುಬ್ಬಳ್ಳಿಯಲ್ಲಿ ಸರ್ಕಾರಿ ಕಾಲೇಜುಗಳನ್ನು ಸ್ಥಾಪಿಸುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?